ಆ) ಹಾಗಿದ್ದಲ್ಲಿ, ಯಾವ ಯಾವ ಶಾಲೆಗಳಲ್ಲಿ ಈ ಕೊರತೆ ಇದೆ, ದರ್ಜೆವಾರು ಮಾಹಿತಿ ನೀಡುವುದು;

ಇ) ಕೊರತೆ ಇರುವ ಸಿಬ್ಬಂದಿಯನ್ನು ತುಂಬಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು?

ಶ್ರೀ ಆರ್. ರಾಮಲಿಂಗರೆಡ್ಡಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು)

ಅ) ಹೌದು

ಆ) ಖಾಲಿ ಹುದ್ದೆಗಳ ವಿವರ ಕೆಳಕಂಡಂತಿದೆ:-

ಅ) ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಸಹ ಶಿಕ್ಷಕರು 41

ಆ) ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಮುಖ್ಯ ಶಿಕ್ಷಕರು 13, ಸಹ ಶಿಕ್ಷಕರು 07, ಬೋಧಕೇತರರು 09.

ಇ) ರಾಜ್ಯ ವಲಯದಲ್ಲಿ ಖಾಲಿ ಇರುವ 3341 ಸರ್ಕಾರಿ ಪ್ರಾಥಮಿಕ ಶಾಲೆಗಳ ಸಹ ಶಿಕ್ಷಕರ ಹುದ್ದೆಗಳಲ್ಲಿ ದೇವದುರ್ಗ ತಾಲ್ಲೂಕಿನಲ್ಲಿ ಖಾಲಿ ಇರುವ 41 ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳು ಸಹ ಸೇರ್ಪಡೆಯಾಗಿವೆ. ಖಾಲಿಯಿರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಮಿತವ್ಯಯ ಆದೇಶ ಸಡಿಲಿಸಿ ಆರ್ಥಿಕ ಇಲಾಖೆ ಅನುಮತಿ ನೀಡುವುದನ್ನು ನಿರೀಕ್ಷಿಸಲಾಗಿದೆ.

2445(3390) ಶ್ರೀ ಅಂಗಾರ್ ಎಸ್. (ಸುಳ್ಯ):- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಸುಳ್ಯ ಸಮುದಾಯ ಆಸ್ಪತ್ರೆಯನ್ನು ಕೆ.ಹೆಚ್.ಎಸ್.ಡಿ.ಪಿ ಯೋಜನೆಯಡಿಯಲ್ಲಿ ಮೇಲ್ದರ್ಜೆಗೇರಿಸಲು ಎಷ್ಟು ಅನುದಾನವನ್ನು ಒದಗಿಸಲಾಗಿದೆ;

ಆ) ಯಾವ ಯಾವ ಸವಲತ್ತುಗಳನ್ನು ನೀಡಲಾಗಿದೆ;

ಇ) ಸದರಿ ಆಸ್ಪತ್ರೆಗೆ ಒದಗಿಸಲಾದ ಸವಲತ್ತುಗಳನ್ನು ಸರಿಯಾಗಿ ಬಳಸಿಕೊಳ್ಳಲು ತಜ್ಞರನ್ನು ನೇಮಕ ಮಾಡಲಾಗಿದೆಯೇ;

ಈ) ಇಲ್ಲದಿದ್ದಲ್ಲಿ, ತಜ್ಞ ವೈದ್ಯರು ಹಾಗೂ ಅಧಿಕಾರಿಗಳನ್ನು ನೇಮಕ ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ; (ಪೂರ್ಣ ವಿವರ ನೀಡುವುದು)

ಶ್ರೀ ಎನ್. ಚಲುವರಾಯಸ್ವಾಮಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಕಟ್ಟಡ ಕಾಮಗಾರಿಗಾಗಿ ಒಟ್ಟು 100.34 ಲಕ್ಷ ರೂ.ಗಳು ಖರ್ಚಾಗಿರುತ್ತದೆ.

ಆ) ಹೊರ ರೋಗಿಗಳ ವಿಭಾಗ, ತುರ್ತು ಚಿಕಿತ್ಸಾ ವಿಭಾಗ, ಶಸ್ತ್ರಚಿಕಿತ್ಸಾ ವಿಭಾಗ, ರೆಡಿಯಾಲಜಿ ವಿಭಾಗ, ಅಡುಗೆ ಕೋಣೆ, ದಾಖಲಾತಿ ವಿಭಾಗ, ಮಹಿಳಾ ಹಾಗೂ ಪುರುಷರ ವಾರ್ಡ್ ವಿಶೇಷ ವಾರ್ಡ್, ಹೆರಿಗೆ ಕೊಠಡಿ, ಆಂಬುಲೆನ್ಸ್ ಶೆಡ್, ಟ್ರಾನ್ಸಫಾರ್ಮರ ಮತ್ತು ವಿದ್ಯುತ್‌ಜನಕ ಕೊಠಡಿ, ಜನರೇಟರ್ ಕೊಠಡಿ, ಒವರ್ ಹೆಡ್ ಟ್ಯಾಂಕ್ ಈ ಸವಲತ್ತುಗಳನ್ನು ಒದಗಿಸಲಾಗಿದೆ.

ಇ) ಮಾಡಲಾಗಿದೆ. ಒಂದು ಪ್ರಸೂತಿ ತಜ್ಞರ ಹುದ್ದೆ ಖಾಲಿ ಇದೆ.

ಈ) ಗುತ್ತಿಗೆ ಆಧಾರದ ಮೇಲೆ ಪ್ರಸೂತಿ ತಜ್ಞರ ಹುದ್ದೆಯನ್ನು ನೇಮಕ ಮಾಡಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದು.

2447(3392) ಶ್ರೀ ಅಂಗಾರ್ ಎಸ್. (ಸುಳ್ಯ):- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಸುಳ್ಯ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಇವೆ ಹಾಗೂ ಅವು ಯಾವುವು;

ಆ) ಈ ಕೇಂದ್ರಗಳಲ್ಲಿ ಇರಬೇಕಾದ ವೈದ್ಯರು ಹಾಗೂ ಇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು;

ಇ) ಈ ಕಾರ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು;

ಈ) ಖಾಲಿ ಇರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು;

ಶ್ರೀ ಎನ್. ಚಲುವರಾಯಸ್ವಾಮಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಒಟ್ಟು 8 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಗುತ್ತಿಗಾರು, ಬೆಳ್ಳಾರೆ, ಕೊಲ್ಲಮೊಗ್ರು, ಸುಬ್ರಮಣ್ಯ, ಅರಂತೋಡು, ಪಂಜ, ಕಡಬ, ಕಾಣಿಯೂರು.

ಆ) ಮಂಜೂರಾದ ಒಟ್ಟು ಸಂಖ್ಯೆ 106.

ಇ) ಒಟ್ಟು ಸಂಖ್ಯೆ 162.

ಈ) ವೈದ್ಯರ ಹುದ್ದೆಗಳನ್ನು ಗುತ್ತಿಗೆ ಆಧಾರ ಮೇಲೆ ನೇಮಿಸಿಕೊಳ್ಳಲು ಜಿಲ್ಲಾಧಿಕಾರಿಯವರಿಗೆ ಅನುಮತಿ ನೀಡಲಾಗಿದೆ. ಮತ್ತು ಇತರ ಸಿಬ್ಬಂದಿಯವರನ್ನು ನೇಮಕ ಮಾಡಿಕೊಳ್ಳಲು ಕ್ರಮ ಕೈಗೊಳ್ಳಲಾಗುತ್ತಿದೆ.

2448(3169) ಶ್ರೀ ಅನಿಲ್ ಹೆಚ್. ಲಾಡ್ (ಕೂಡ್ಲಿಗಿ):- ಮಾನ್ಯ ಗ್ರಾಮೀಣ ನೀರು ಸರಬರಾಜು, ನೈರ್ಮಲ್ಯ ಮತ್ತು ಗ್ರಾಮೀಣಾಭಿವೃದ್ಧಿ ಇಂಜಿನಿಯರಿಂಗ್ ರಾಜ್ಯ ಸಚಿವರು ದಯವಿಟ್ಟು ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ರಾಜ್ಯ ಸರ್ಕಾರ ಹಳ್ಳಿಗಳಲ್ಲಿ ಶೌಚಾಲಯ ನಿರ್ಮಾಣಕ್ಕೆ ಕ್ರಮ ತೆಗೆದುಕೊಂಡಿದೆಯೇ;

ಆ) ಕೂಡ್ಲಿಗಿ ವಿಧಾನ ಸಭಾಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ಶೌಚಾಲಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ಬಗ್ಗೆ ಯಾವಾಗ ಕ್ರಮ ತೆಗೆದುಕೊಳ್ಳಲಾಗುವುದು?

ಶ್ರೀ ಬಿ. ಸತ್ಯನಾರಾಯಣ, (ಗ್ರಾಮೀಣ ನೀರು ಸರಬರಾಜು, ನೈರ್ಮಲ್ಯ ಮತ್ತು ಗ್ರಾಮೀಣಾಭಿವೃದ್ಧಿ ಇಂಜನಿಯರಿಂಗ್ ರಾಜ್ಯ ಸಚಿವರು)

ಅ) ಗ್ರಾಮೀಣ ಪ್ರದೇಶಗಳಲ್ಲಿ ಪರಿಸರ ನೈರ್ಮಲ್ಯ ಮತ್ತು ವೈಯಕ್ತಿಕ ಶುಚಿತ್ವ ಕಾಪಾಡಲು ಗ್ರಾಮೀಣ ಕುಟುಂಬಗಳಿಗೆ ವೈಯಕ್ತಿಕ ಶೌಚಾಲಯಗಳನ್ನು ಹಾಗೂ ಸಮುದಾಯ